All India Radio: Bangalore
National Bulletin In Kannada
02.11.2025  19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಇಸ್ರೋದ ಸಂವಹನ ಉಪಗ್ರಹ ಸಿಎಂಎಸ್-೦೩ ಶ್ರೀಹರಿಕೋಟಾದಿಂದ ಯಶಸ್ವಿ ಉಡಾವಣೆ
- ನವದೆಹಲಿಯ ಭಾರತ್ ಮಂಟಂಪಂನಲ್ಲಿ ನಾಳೆ ವಿಜ್ಞಾನ ಮತ್ತು ತಂತ್ರಜ್ಞಾನ ನಾವೀನ್ಯತಾ ಸಮಾವೇಶ-ಎಸ್ಟಿಕ್ ೨೦೨೫ ಉದ್ಘಾಟಿಸಲಿರುವ ಪ್ರಧಾನಿ
- ಬಿಹಾರ ವಿಧಾನಸಭಾ ಚುನಾವಣೆ ; ಮೊದಲ ಹಂತದ ಪ್ರಚಾರ ಅಂತಿಮ ಹಂತಕ್ಕೆ
- ಟಿ-೨೦ ಕ್ರಿಕೆಟ್ ; ಆಸ್ಟ್ರೇಲಿಯಾ ವಿರುದ್ಧ ೫ ವಿಕೆಟ್‌ಗಳ ಜಯಗಳಿಸಿದ ಭಾರತ
- ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ; ಭಾರತ-ದಕ್ಷಿಣ ಆಫ್ರಿಕಾ ಪಂದ್ಯ ಪ್ರಗತಿಯಲ್ಲಿ

<><><><>

ಇಸ್ರೋ ಇಂದು ಸಂಜೆ ಶ್ರೀಹರಿಕೋಟಾದಿಂದ ಭಾರತದ ಅತ್ಯಂತ ಭಾರವಾದ ಸಂವಹನ ಉಪಗ್ರಹ ಸಿಎಂಎಸ್-೦೩ ಅನ್ನು ಉಡಾವಣೆ ಮಾಡಿತು. ಭಾರತೀಯ ಉಡಾವಣಾ ವಾಹನವು ಹೊತ್ತೊಯ್ದು ಜಿಯೋಸಿಂಕ್ರೋನಸ್ ಟ್ರಾನ್ಸ್‌ಫರ್ ಆರ್ಬಿಟ್‌ಗೆ ಹೆವಿಲಿಫ್ಟ್ ರಾಕೆಟ್ ಅನ್ನು ಸಂಜೆ ೫.೨೬ ಕ್ಕೆ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆ ಮಾಡಲಾಯಿತು. ನೌಕಾ ಸಂವಹನವನ್ನು ಹೆಚ್ಚಿಸುವುದು ಮತ್ತು ದೂರದ ಪ್ರದೇಶಗಳಲ್ಲಿ ಡಿಜಿಟಲ್ ಸಂಪರ್ಕವನ್ನು ಹೆಚ್ಚಿಸುವುದು ಈ ಕಾರ್ಯಾಚರಣೆಯ ಗುರಿಯಾಗಿದೆ. ಇದು ಭಾರತದ ಅತ್ಯಂತ ಶಕ್ತಿಶಾಲಿ ರಾಕೆಟ್‌ನ ಐದನೇ ಕಾರ್ಯಾಚರಣಾ ಹಾರಾಟವಾಗಿದೆ. ಉಪಗ್ರಹವು ಬಹು-ಬ್ಯಾಂಡ್ ಮಿಲಿಟರಿ ಸಂವಹನ ವ್ಯವಸ್ಥೆಯಾಗಿದೆ. ದೇಶದ ಬಾಹ್ಯಾಕಾಶ ವಿಜ್ಞಾನಿಗಳನ್ನು ಶ್ಲಾಘಿಸಿರುವ ಪ್ರಧಾನಿ ನರೇಂದ್ರ ಮೋದಿ, ಈ ಯಶಸ್ಸು ರಾಷ್ಟ್ರೀಯ ಪ್ರಗತಿಯನ್ನು ಹೆಚ್ಚಿಸಲಿದೆ ಮತ್ತು ಅಸಂಖ್ಯಾತ ಜನರನ್ನು ಸಬಲೀಕರಣಗೊಳಿಸಲಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ಇಸ್ರೋದ ಮಾಜಿ ವಿಜ್ಞಾನಿ ಹಾಗೂ ನೆಹರು ತಾರಾಲಯದ ನಿರ್ದೇಶಕ ಡಾ. ಬಿ.ಆರ್. ಗುರು ಪ್ರಸಾದ್, ಪ್ರತಿಕ್ರಿಯಿಸಿ

ಈಗಾಗಲೇ ಭಾರತದ ಹಲವಾರು ಸಂಪರ್ಕ ಉಪಗ್ರಹಗಳು ಕಕ್ಷೆಯಲ್ಲಿದ್ದು, ಸಿಎಂಎಸ್-೦೩ ಈ ಉಪಗ್ರಹಗಳ ಗುಂಪಿಗೆ ಸೇರಿಕೊಳ್ಳಲಿದೆ ಎಂದು ಹೇಳಿದ್ದಾರೆ.

ಧ್ವನಿ : ಡಾ. ಗುರುಪ್ರಸಾದ್, ನೆಹರು ತಾರಾಲಯದ ನಿರ್ದೇಶಕ (೩೩ ಸೆಕೆಂಡ್‌ಗಳು)

<><><><>

ನಾಳೆಯಿಂದ ಇದೇ ೫ರವರೆಗೆ ನವದೆಹಲಿಯ ಭಾರತ್ ಮಂಟಪಂನಲ್ಲಿ ಆಯೋಜಿಸಲಾಗಿರುವ ಉದಯೋನ್ಮುಖ ವಿಜ್ಞಾನ ಮತ್ತು ತಂತ್ರಜ್ಞಾನ ನಾವೀನ್ಯತಾ ಸಮಾವೇಶ-ಎಸ್ಟಿಕ್ ೨೦೨೫ಅನ್ನು ಪ್ರಧಾನಿ ನರೇಂದ್ರ ಮೋದಿ ನಾಳೆ ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ, ದೇಶದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪರಿಸರ ವ್ಯವಸ್ಥೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ೧ ಲಕ್ಷ ಕೋಟಿ ರೂಪಾಯಿ ಮೊತ್ತದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ಯೋಜನಾ ನಿಧಿಗೆ ಚಾಲನೆ ನೀಡಲಿದ್ದಾರೆ. ಈ ಮೂರು ದಿನಗಳ ಸಮಾವೇಶ ಶೈಕ್ಷಣಿಕ, ಸಂಶೋಧನಾ ಸಂಸ್ಥೆಗಳು, ಉದ್ಯಮಗಳು ಮತ್ತು ಸರ್ಕಾರದ ಮೂರು ಸಾವಿರಕ್ಕೂ ಅಧಿಕ ಪ್ರತಿನಿಧಿಗಳನ್ನು ಒಟ್ಟುಗೂಡಿಸಲಿದೆ.

ಕಾರ್ಯಕ್ರಮದ ಭಾಗವಾಗಿ ಚರ್ಚೆಗಳು ವಿಚಾರ ಸಂಕೀರ್ಣಗಳು, ಪ್ರಾತ್ಯಕ್ಷಿಕೆಗಳು ಮತ್ತು ತಂತ್ರಜ್ಞಾನ ಪ್ರದರ್ಶನಗಳು ನಡೆಯಲಿದ್ದು, ಸಂಶೋಧಕರು ಮತ್ತು ಉದ್ಯಮಿ ಹಾಗೂ ಯುವ ನಾವೀನ್ಯಕಾರರ ನಡುವೆ ಸಹಕಾರವನ್ನು ಬೆಳೆಸಿ ಭಾರತದ ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಒಂದು ವೇದಿಕೆ ಒದಗಿಸುತ್ತದೆ.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಪ್ರಚಾರವು ಮುಕ್ತಾಯಗೊಳ್ಳಲು ಕೇವಲ ಎರಡು ದಿನಗಳು ಮಾತ್ರ ಉಳಿದಿದ್ದು, ಇದೀಗ ಅಂತಿಮ ಹಂತಕ್ಕೆ ತಲುಪಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ಎರಡರ ಹಿರಿಯ ನಾಯಕರು ಚುನಾವಣಾ ವ್ಯಾಪ್ತಿಯ ಕ್ಷೇತ್ರಗಳಲ್ಲಿ ಹಲವಾರು ಚುನಾವಣಾ ರ‍್ಯಾಲಿಗಳನ್ನುದ್ದೇಶಿಸಿ ಮಾತನಾಡಿದರು.

ಬಿಜೆಪಿಯ ತಾರಾ ಪ್ರಚಾರಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಪಾಟ್ನಾದಲ್ಲಿ ರೋಡ್ ಶೋ ನಡೆಸಿದರು. ೧೦ನೇ ಸಿಖ್ ಗುರು ಗುರು ಗೋವಿಂದ್ ಸಿಂಗ್ ಜಿ ಮಹಾರಾಜ್ ಅವರ ಜನ್ಮಸ್ಥಳವಾದ ಪಾಟ್ನಾ ನಗರದ ತಖ್ತ್ ಶ್ರೀ ಹರಿಮಂದಿರ್ ಸಾಹಿಬ್‌ನಲ್ಲಿ ಮೋದಿ ಪ್ರಾರ್ಥನೆ ಸಲ್ಲಿಸಿದರು. ಮೊದಲ ಹಂತದಲ್ಲಿ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಇದೇ ೬ ರಂದು ಮತದಾನ

ನಡೆಯಲಿದೆ. ಇದೇ ೧೧ ರಂದು ನಡೆಯಲಿರುವ ಎರಡನೇ ಹಂತದ ಬಿಹಾರ ವಿಧಾನಸಭಾ ಚುನಾವಣೆಗಾಗಿ ೪೦ ತಾರಾ ಪ್ರಚಾರಕರ ಪಟ್ಟಿಯನ್ನು ಕಾಂಗ್ರೆಸ್ ಇಂದು ಬಿಡುಗಡೆ ಮಾಡಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ, ಪ್ರಮುಖ ಕ್ಷೇತ್ರಗಳಲ್ಲಿ ಪಕ್ಷದ ರ್‍ಯಾಲಿಗಳು ಮತ್ತು ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಂಡು ತಮ್ಮ ಅಭ್ಯರ್ಥಿಗಳ ಪರ ಮತ ಯಾಚಿಸಲಿದ್ದಾರೆ.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಯಾವುದೇ ಹಿಂಸಾಚಾರವನ್ನು ಸಹಿಸಲಾಗುವುದಿಲ್ಲ. ಮತದಾರರು ಶಾಂತಿಯುತವಾಗಿ ಮತ್ತು ಮುಕ್ತವಾಗಿ ಮತ ಚಲಾಯಿಸಲು ಸಾಧ್ಯವಾಗುವಂತೆ ಚುನಾವಣಾ ಆಯೋಗ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದ್ದಾರೆ.

<><><><>

೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶವಾಗಲು ಮಹಿಳೆಯರು ಮತ್ತು ಪುರುಷರ ಸಮಾನ ಭಾಗವಹಿಸುವಿಕೆಯ ಅಗತ್ಯವಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ. ಹರಿದ್ವಾರದಲ್ಲಿಂದು ಪತಂಜಲಿ ವಿಶ್ವವಿದ್ಯಾಲಯದ ಎರಡನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಸಾಮೂಹಿಕ ಪ್ರಯತ್ನ ಅತ್ಯಗತ್ಯ ಎಂದು ಹೇಳಿದರು. ಉತ್ತರಾಖಂಡದ ಡೆಹ್ರಾಡೂನ್‌ನ ರಾಜ್‌ಪುರ ರಸ್ತೆಯಲ್ಲಿರುವ ಪಾದಚಾರಿ ಸೇತುವೆಯನ್ನು ಉದ್ಘಾಟಿಸಿದ ರಾಷ್ಟ್ರಪತಿಯವರು ಇಂದು ಸಂಜೆ, ಡೆಹ್ರಾಡೂನ್‌ನ ರಾಷ್ಟ್ರಪತಿ ನಿಕೇತನದಲ್ಲಿ ನಡೆಯುವ ಅಂತಾರಾಷ್ಟ್ರೀಯ ಸಾಹಿತ್ಯ, ಸಂಸ್ಕೃತಿ ಮತ್ತು ಕಲಾ ಉತ್ಸವದಲ್ಲಿ ಭಾಗವಹಿಸುವರ ಜೊತೆ ಸಂವಹನ ನಡೆಸಲಿದ್ದಾರೆ.

<><><><>

ಸಂಸ್ಕೃತಿ ಸಚಿವಾಲಯದ ಸಹಯೋಗದೊಂದಿಗೆ ಪ್ರಸಾರ ಭಾರತಿ ವತಿಯಿಂದ ಇಂದಿನಿಂದ ಇದೇ ೨೯ ರವರೆಗೆ ೭೭ನೇ ಆವೃತ್ತಿಯ ಆಕಾಶವಾಣಿ ಸಂಗೀತ ಸಮ್ಮೇಳನವನ್ನು ಆಯೋಜಿಸಲಾಗಿದೆ. ದೆಹಲಿ, ಮುಂಬೈ ಮತ್ತು ಚೆನ್ನೈನಲ್ಲಿ ಇಂದು ಸಂಗೀತ ಕಚೇರಿಗಳ ಆಯೋಜನೆಯ ಮೂಲಕ

ಸಂಗೀತ ಸಮ್ಮೇಳನಕ್ಕೆ ಚಾಲನೆ ದೊರೆಯಲಿದ್ದು, ದೇಶದ ವಿವಿಧ ೨೪ ಸ್ಥಳಗಳಲ್ಲಿ ಒಂದು ತಿಂಗಳ ಅವಧಿಯಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ೧೯೫೪ರಲ್ಲಿ ಪ್ರಾರಂಭವಾದಾಗಿನಿಂದ, ಆಕಾಶವಾಣಿ ಸಂಗೀತ ಸಮ್ಮೇಳನ ಭಾರತದ ಪ್ರಮುಖ ಸಾಂಸ್ಕೃತಿಕ ಸಂಪ್ರದಾಯಗಳಲ್ಲಿ ಒಂದಾಗಿದೆ ಎಂದು ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ.

<><><><>

ಗ್ರಂಥಾಲಯ ಕಲಿಕೆಯ ದೇವಾಲಯ. ಇದು ವಿಮರ್ಶಾತ್ಮಕ ಚಿಂತನೆಯನ್ನು ಪೋಷಿಸುವ ಮತ್ತು ವ್ಯಕ್ತಿಗಳು ಮತ್ತು ಸಮುದಾಯಗಳನ್ನು ಸಬಲೀಕರಣಗೊಳಿಸುವ ಸ್ಥಳವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದ್ದಾರೆ. ಸಮುದಾಯಗಳನ್ನು ಸಬಲೀಕರಣಗೊಳಿಸುವ ಗ್ರಂಥಾಲಯಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನವನ್ನು ವರ್ಚುವಲ್ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಜಾಗತಿಕ ದೃಷ್ಟಿಕೋನಗಳು ಡಿಜಿಟಲ್ ಯುಗದಲ್ಲಿ, ಗ್ರಂಥಾಲಯಗಳು ಜನರು ಅಧಿಕೃತ ಮಾಹಿತಿಯನ್ನು ಪಡೆಯಲು ಅನುವು ಮಾಡಿಕೊಡುವ ಜ್ಞಾನ ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತವೆ ಎಂದು ಅವರು ಹೇಳಿದ್ದಾರೆ. ಕೇರಳದ ೮೦ ವರ್ಷಗಳ ಗ್ರಂಥಾಲಯ ಚಳುವಳಿ ಮತ್ತು ಗ್ರಂಥಾಲಯಗಳನ್ನು ರೋಮಾಂಚಕ ಸಮುದಾಯ ಕೇಂದ್ರಗಳಾಗಿ ಪರಿವರ್ತಿಸುವ ಪಿ.ಎನ್. ಪಣಿಕ್ಕರ್ ಅವರ ದೃಷ್ಟಿಕೋನವನ್ನು ಶ್ಲಾಘಿಸಿದ ಉಪರಾಷ್ಟ್ರಪತಿ, ಕೇರಳದ ಗ್ರಂಥಾಲಯ ಚಳುವಳಿಯ ಪರಂಪರೆಯನ್ನು ಮುಂದುವರಿಸುವ ನಿಟ್ಟಿನಲ್ಲಿ ತಿರುವನಂತಪುರಂನಲ್ಲಿ ಪಿ.ಎನ್. ಪಣಿಕ್ಕರ್ ಫೌಂಡೇಶನ್ ಎರಡು ದಿನಗಳ ಸಮ್ಮೇಳನವನ್ನು ಆಯೋಜಿಸಿತ್ತು.

<><><><>

ನವಿ ಮುಂಬೈನ ಡಾ.ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆಯುತ್ತಿರುವ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ಇತ್ತೀಚಿನ ವರದಿ ಬಂದಾಗ ಭಾರತ ೪೫.೧ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೬೨ ರನ್ ಮಾಡಿ ಆಡುತ್ತಿದೆ. ಶಫಾಲಿ ಶರ್ಮ ಮೂರು ವರ್ಷಗಳ ಬಳಿಕ ಅರ್ಧಶತಕ ಪೂರೈಸಿ ೮೭ ರನ್‌ಗೆ ಔಟಾಗಿದ್ದಾರೆ. ಸ್ಮೃತಿ ಮಂದಾನ ೪೫ ರನ್ ಗಳಿಸಿ ಟ್ರಯಾನ್‌ಗೆ ವಿಕೆಟ್ ಒಪ್ಪಿಸಿದ್ದಾರೆ.

<><><><>

ಆಸ್ಟ್ರೇಲಿಯಾದ ಓವಲ್‌ನಲ್ಲಿ ಇಂದು ನಡೆದ ಐದು ಪಂದ್ಯಗಳ ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಮೂರನೇ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾ ತಂಡದ ವಿರುದ್ಧ ೧೮.೩ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೮೮ ರನ್ ಗಳಿಸಿ ಜಯಗಳಿಸಿದೆ. ಇದಕ್ಕೂ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡವು ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೮೬ ರನ್ ಗಳಿಸಿತು. ೧೮೭ ರನ್‌ಗಳ ಗುರಿ ಬೆನ್ನತ್ತಿದ ಭಾರತ ೫ ವಿಕೆಟ್‌ಗಳು ಮತ್ತು ೯ ಎಸೆತಗಳು ಬಾಕಿ ಇರುವಾಗಲೇ ತನ್ನ ಗೆಲುವು ಸಾಬೀತುಪಡಿಸಿತು. ವಾಷಿಂಗ್ಟನ್ ಸುಂದರ್ ಅವರ ೨೩ ಎಸೆತಗಳಲ್ಲಿ ಅಜೇಯ ೪೯ ರನ್‌ಗಳು ಭಾರತವು ಗುರಿಯನ್ನು ಯಶಸ್ವಿಯಾಗಿ ಬೆನ್ನಟ್ಟಲು ಸಹಾಯ ಮಾಡಿತು.  ನಾಲ್ಕು ಓವರ್‌ಗಳಲ್ಲಿ ೩ ವಿಕೆಟ್‌ಗಳನ್ನು ಕಬಳಿಸಿದ ಅರ್ಶ್‌ದೀಪ್ ಸಿಂಗ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಈ ಗೆಲುವಿನೊಂದಿಗೆ, ಭಾರತವು ಐದು ಪಂದ್ಯಗಳ ಸರಣಿಯನ್ನು ೧-೧ ರಿಂದ ಸಮಬಲಗೊಳಿಸಿದೆ.

<><><><>

೨೦೨೫ ರ ಏಷ್ಯನ್ ಯೂತ್ ಗೇಮ್ಸ್‌ನಲ್ಲಿ ೪೮ ಪದಕಗಳನ್ನು ಗೆದ್ದ ಭಾರತೀಯ ತಂಡವನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ದೇಶದ ಯುವ ಕ್ರೀಡಾಪಟುಗಳು ತಮ್ಮ ಅತ್ಯುತ್ತಮ ಪ್ರದರ್ಶನದೊಂದಿಗೆ ಕ್ರೀಡಾಕೂಟದಲ್ಲಿ ಇತಿಹಾಸ ಬರೆದಿದ್ದಾರೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ವೃತ್ತಿಪರ ಟೆನಿಸ್‌ನಿಂದ ನಿವೃತ್ತಿ ಘೋಷಿಸಿದ ಮತ್ತು ಎರಡು ದಶಕಗಳ ಕಾಲದ ಗಮನಾರ್ಹ ವೃತ್ತಿಜೀವನವನ್ನು ಹೊಂದಿರುವ ಭಾರತೀಯ ಟೆನಿಸ್ ಆಟಗಾರ ರೋಹನ್ ಬೋಪಣ್ಣ ಅವರನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿನಂದಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>